ಕರ್ನಾಟಕ ಸರ್ಕಾರ

**ಜೂನ್ 6, 2016**

**ನಿವೃತ್ತ ಪೊಲೀಸ್ ಅಧಿಕಾರಿ ಗುರುಲಿಂಗಪ್ಪ ಸೋಮಲಿಂಗಪ್ಪ ಇಟ್ಟಣಗಿ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ**

**ಬೆಂಗಳೂರು, ಜೂನ್ 6:**

ನಿವೃತ್ತ ಪೊಲೀಸ್ ಅಧಿಕಾರಿ ಗುರುಲಿಂಗಪ್ಪ ಸೋಮಲಿಂಗಪ್ಪ ಇಟ್ಟಣಗಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಡೆಪ್ಯೂಟಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ಆಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ನಂತರವೂ ಸಾರ್ವಜನಿಕ ಬದುಕಿನಲ್ಲಿ ಸಕ್ರಿಯರಾಗಿದ್ದ ಇಟ್ಟಣಗಿ ಅವರು ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಸಂಗೊಳ್ಳಿ ರಾಯಣ್ಣನ ಜನ್ಮ ಸ್ಥಳ ನಂದಗಡದ ಸರ್ವಾಂಗೀಣ ಅಭಿವೃದ್ಧಿಗೆ ನೀಲನಕ್ಷೆ ಸಿದ್ದಪಡಿಸಿ ಅಪಾರವಾಗಿ ಶ್ರಮಿಸಿದ್ದರು. ಅಲ್ಲದೆ, ನಂದಗಡದಲ್ಲಿ ಸಂಗೊಳ್ಳಿ ರಾಯಣ್ಣ ಸ್ಮಾರಕ ವಸತಿ ಶಾಲೆಯನ್ನು ಪ್ರಾರಂಭಿಸುವಲ್ಲಿ ಪ್ರೇರಕ ಶಕ್ತಿಯಾಗಿದ್ದರು. ಪೊಲೀಸ್ ಇಲಾಖೆಯಲ್ಲಿ ಇರುವಾಗ ಮಾತ್ರವಲ್ಲದೆ, ಸಾರ್ವಜನಿಕ ಬದುಕಿನಲ್ಲೂ, ಅಷ್ಟೇ ಏಕೆ ? ಇಡೀ ಜೀವನದಲ್ಲೇ ಶಿಸ್ತಿನ ಸಿಪಾಯಿಯಾಗಿದ್ದರು.

ಇಟ್ಟಣಗಿ ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಇಟ್ಟಣಗಿ ಅವರ ಅಗಲಿಕೆಯನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಹಾಗೂ ಅಭಿಮಾನಿ ವರ್ಗಕ್ಕೆ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

***************

ಡಿ ಪಿ ಎಂ